ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 29–9–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಗಾಂಧಿ ಜಯಂತಿ ಹಾಗೂ ಗಾಂಧಿ ಸೇವಾ ಪ್ರಶಸ್ತಿ ಕುರಿತಂತೆ ಪತ್ರಿಕಾಗೋಷ್ಠಿ:<br><br>ಶ್ರೀ ಆರ್. ರೋಷನ್ ಬೇಗ್,<br>ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಖಾತೆ ಸಚಿವರು, | 30–09–2014<br>ಮಂಗಳವಾರ<br>ಬೆಳಿಗ್ಗೆ<br>11–00 ಗಂಟೆಗೆ | ವಾರ್ತಾ ಸೌಧ,<br>ನೆಲಮಹಡಿ ಸಭಾಂಗಣ,<br>ಭಗವಾನ್ ಮಹಾವೀರ ಜೈನ್ ರಸ್ತೆ,<br>ಬೆಂಗಳೂರು - 560 001. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಅಕ್ಟೋಬರ್ 8 ರಂದು ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ

**ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ)**

ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳು, ತಾಲ್ಲೂಕು ಹಾಗೂ ರಾಜ್ಯ ಮಟ್ಟದಲ್ಲಿ ಅಕ್ಟೋಬರ್ 8 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಗುತ್ತಿದೆ.

ರಾಜ್ಯ ಮಟ್ಟದಲ್ಲಿ ನಡೆಯಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ವಿಧಾನಸೌಧದ ಬಾಂಕ್ವೆಟ್ ಹಾಲ್‌ನಲ್ಲಿ ಅಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ.

ಈ ಸಮಾರಂಭದಲ್ಲಿ ಸಚಿವ ಸಂಪುಟದ ಸದಸ್ಯರು, ಶಾಸಕರುಗಳು, ಮತ್ತು ಇತರೆ ಗಣ್ಯರು ಭಾಗವಹಿಸಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯದ ಪ್ರಕಟಣೆ ತಿಳಿಸಿದೆ.

ಪಿಹೆಚ್:ಜಿಪಿಆರ್.

## "ವನ್ಯಜೀವಿ ಸಂರಕ್ಷಣೆಗಾಗಿ ನಡಿಗೆಗೆ : ಚಾಲನೆ

**ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ)**

ಕರ್ನಾಟಕ ಅರಣ್ಯ ಇಲಾಖೆ ವತಿಯಿಂದ 60 ನೇ ವನ್ಯಜೀವಿ ಸಪ್ತಾಹ - 2014 ರ ಸಂಬಂಧವಾಗಿ ಅಕ್ಟೋಬರ್ 2 ರಂದು ಬೆಳಿಗ್ಗೆ 7–00 ಗಂಟೆಗೆ ನಗರದ ಹೈಕೋರ್ಟ್ ಅಂಚೆ ಕಚೇರಿ ಗೇಟ್ ಮುಂಭಾಗದಿಂದ ಲಾಲ್‌ಬಾಗ್ ವರೆಗೆ ವನ್ಯಜೀವಿ ಸಂರಕ್ಷಣೆಗಾಗಿ ನಡಿಗೆ ಎಂಬ ಕಾರ್ಯಕ್ರಮಕ್ಕೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ಶ್ರೀ ಬಿ. ರಮಾನಾಥ್ ರೈ ಅವರು ಚಾಲನೆ ನೀಡಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಶ್ರೀ ಆರ್. ರೋಷನ್ ಬೇಗ್, ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಖಾತೆ ಸಚಿವರು ವಹಿಸಲಿದ್ದಾರೆ. ಸಾರಿಗೆ ಸಚಿವರು ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಶ್ರೀ ರಾಮಲಿಂಗಾರೆಡ್ಡಿ ಅವರು ವಿಶೇಷ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಪಿಹೆಚ್:ಜಿಪಿಆರ್.

## ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಖಾಲಿಯಿರುವ ವಾಹನ ಚಾಲಕರು ಹಾಗೂ ಮೋಟಾರ್ ಸೈಕಲ್ ಆರ್ಡರ್ಲಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿ, ದಿನಾಂಕ 3–10–2013 ರಲ್ಲಿ ಅಧಿಸೂಚನೆ ಹೊರಡಿಸಲಾಗಿತ್ತು. ಅದರನ್ವಯ ಸಂವಿಧಾನದ ಅನುಚ್ಛೇದ 371 (ಜೆ) ಅಡಿ ಹೊರಡಿಲಾದ ಆದೇಶ ಮತ್ತು ನಿಯಮಗಳನುಸಾರ ಹೈದರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸುವ ಸಲುವಾಗಿ ಈ ಮೇಲ್ಕಂಡ ಅಧಿಸೂಚನೆಯಲ್ಲಿ ಮಾರ್ಪಾಡು ಮಾಡಲಾಗಿದೆ.

ವಾಹನ ಚಾಲಕ ಸಿವಿಲ್ ಹುದ್ದೆಗೆ ಹೈದರಾಬಾದ್ ಕರ್ನಾಟಕ ಪ್ರದೇಶದವರಿಗೆ 1 ಹುದ್ದೆ, ಸಾಮಾನ್ಯ –1, ಪ್ರವರ್ಗ–1, ಪ್ರವರ್ಗ - 2ಎ 1, ಮಹಿಳೆ–1 ಒಟ್ಟು 5 ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಹ್ವಾನಿಸಲಾಗಿದೆ.

ಮೋಟಾರ್ ಸೈಕಲ್ ಆರ್ಡರ್ಲಿ –1, ಹುದ್ದೆಗೆ ಹೈದಾರಾಬಾದ್ ಕರ್ನಾಟಕ ಪ್ರದೇಶದವರಿಗೆ, ಮತ್ತೊಂದು ಹುದ್ದೆಗೆ ಪರಿಶಿಷ್ಟ ಜಾತಿಯ ಅಭ್ಯರ್ಥಿಗೆ ಮೀಸಲಿದ್ದು, ಇದರಲ್ಲಿ ಒಟ್ಟು 2 ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಈ ಸಂಸ್ಥೆಯ ಅಧಿಸೂಚನೆ ದಿನಾಂಕ 3–10–2013 ರಲ್ಲಿ ಅರ್ಜಿಯನ್ನು ಸಲ್ಲಿಸಿದ ಅಭ್ಯರ್ಥಿಗಳು ಹೈದರಾಬಾದ್–ಕರ್ನಾಟಕ ಪ್ರದೇಶದ 371 (ಜೆ) ಮೀಸಲಾತಿ ಸೌಲಭ್ಯ ಪಡೆಯಲು ಇಚ್ಛಿಸಿದಲ್ಲಿ ಅನುಬಂಧ ಎ ರಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ದಿನಾಂಕ 3–10–2014 ರೊಳಗೆ, ಸಲ್ಲಿಸಲು ಸೂಚಿಸಲಾಗಿದೆ. ಅಲ್ಲದೆ ಈ ಕುರಿತು ಮಾಹಿತಿಯನ್ನು www.lokayuktha.kar.nic.in ರಲ್ಲಿ ಹಾಗೂ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರು ಪ್ರತಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಹೆಚ್:ಜಿಪಿಆರ್.

## ಫ್ಯಾಶನ್ ಟೆಕ್ನಾಲಜಿ ಕುರಿತಂತೆ ಉಚಿತ ತರಬೇತಿ

**ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ)**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ನಿರುದ್ಯೋಗಿ ಮಹಿಳಾ/ಪುರುಷ ಅಭ್ಯರ್ಥಿಗಳಿಗೆ National Institute of Fashion Technology,ಬೆಂಗಳೂರು ಇಲ್ಲಿ ಫ್ಯಾಶನ್ ಟೆಕ್ನಾಲಜಿ ಸಂಬಂಧಿಸಿದಂತೆ ಗಾರ್ಮೆಂಟ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಾಲಜಿ ಹಾಗೂ ಇಂಡಸ್ಟ್ರೀಯಲ್ ಪ್ಯಾಟರ್ನ್ ಮೇಕಿಂಗ್ ವಿಷಯದಲ್ಲಿ ಉಚಿತ ತರಬೇತಿಯನ್ನು ನೀಡಲಾಗುವುದು.

ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಪಡೆದು, ಭರ್ತಿಮಾಡಿದ ಅರ್ಜಿಯನ್ನು ಅಕ್ಟೋಬರ್ 15 ರೊಳಗಾಗಿ ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ www.backwardclasses.kar.nic.on ನ್ನು ವೀಕ್ಷಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಹೆಚ್:ಜಿಪಿಆರ್.

# ವಿಶ್ವ ಹಿರಿಯ ನಾಗರಿಕರ ದಿನಾಚರಣೆ –2014

**ಬೆಂಗಳೂರು, ಸೆಪ್ಟೆಂಬರ್ 29, (ಕರ್ನಾಟಕ ವಾರ್ತೆ)**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಕಾರದೊಂದಿಗೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆ–2014 ಯನ್ನು ರವೀಂದ್ರ ಕಲಾಕ್ಷೇತ್ರ ಇಲ್ಲಿ ಅಕ್ಟೋಬರ್ 1 ರಂದು ಬೆಳಿಗ್ಗೆ 11–00 ಗಂಟೆಗೆ ಏರ್ಪಡಿಸಲಾಗಿದೆ. ಸಮಾರಂಭವನ್ನು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಉದ್ಘಾಟಿಸುವರು. ಈ ಸಮಾರಂಭದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಶ್ರೀ ಹೆಚ್. ಎಸ್. ದೊರೆಸ್ವಾಮಿ, ಉಪಸ್ಥಿತರಿರುವರು. ಸಮಾರಂಭದ ಅಧ್ಯಕ್ಷತೆ ಚಾಮರಾಜಪೇಟೆ ಶಾಸಕ ಶ್ರೀ ಆರ್.ವಿ. ದೇವರಾಜ್ ಅವರು ವಹಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವೆ ಶ್ರೀಮತಿ ಉಮಾಶ್ರೀ ಅವರು ಪ್ರಶಸ್ತಿ ಪ್ರದಾನ ಮಾಡುವರು. ಮುಖ್ಯ ಅತಿಥಿಗಳಾಗಿ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಸಚಿವ ಶ್ರೀ ಅನಂತಕುಮಾರ್, ಸಾರಿಗೆ ಸಚಿವ ಶ್ರೀ ರಾಮಲಿಂಗಾರೆಡ್ಡಿ, ಗೃಹ ಸಚಿವ ಶ್ರೀ ಕೆ.ಜೆ. ಜಾರ್ಜ್, ಸಮಾಜ ಕಲ್ಯಾಣ ಸಚಿವ ಶ್ರೀ ಆಂಜನೇಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಶ್ರೀ ದಿನೇಶ್ ಗುಂಡೂರಾವ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಹಾಗೂ ಶಾಸಕಿ ಶ್ರೀಮತಿ ಶಂಕುಂತಲಾ ಶೆಟ್ಟಿ ಅವರು ವಹಿಸುವರು. ಸಮಾರಂಭದಲ್ಲಿ ಮಹಿಳಾ ಮತ್ತು ಮಕ್ಕಳ ಅಬಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ: ಅಮಿತಾ ಪ್ರಸಾದ್ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ನಿರ್ದೇಶಕ ಶ್ರೀ ಪಿ.ಸಿ. ಜಯಣ್ಣ ಅವರು ಉಪಸ್ಥಿತರಿರುವರು.